**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೇಶವ ಪ್ರಸಾದ್ ಎಸ್.ರವರು ನಿಯಮ 72ರ ಅಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಹೇಳಿಕೆ**

**ಸೂಚನೆ:-**

ಬೆಂಗಳೂರಿನ ಹೆಬ್ಬಾಳ ಫ್ಲೈಓವರ್ ಬಳಿ ದಿನನಿತ್ಯ ಹೆಚ್ಚಿನ ಸಂಖ್ಯೆಯಲ್ಲಿ ವಾಹನ ದಟ್ಟಣೆಯಿದ್ದು ಇದರಿಂದ ಸಂಚಾರಕ್ಕೆ ಅಡ್ಡಿ ಉಂಟಾಗಿ ಟ್ರಾಫಿಕ್ ಜಾಮ್ ಉಂಟಾಗುತ್ತಿದೆ. ಇದರಿಂದ ಸಾರ್ವಜನಿಕರಿಗೆ ಅನಾನುಕೂಲಾಗುತ್ತಿದ್ದು ಪ್ರತಿ ನಿತ್ಯ ಏರ್‌ಪೋರ್ಟ್ ಹಾಗೂ ಇನ್ನಿತರೆ ಕೆಲಸಗಳಿಗೆ ತೆರಳುವವರಿಗೆ ತುಂಬಾ ತೊಂದರೆ ಉಂಟಾಗುತ್ತಿದೆ. ಸಾರ್ವಜನಿಕರಿಗೆ ಸುಲಭ ಸಂಚಾರವನ್ನು ಕಲ್ಪಿಸಲು ಸರ್ಕಾರವು ಯಾವುದಾದರೂ ಪರ್ಯಾಯ ಪರಿಹಾರವನ್ನು ಕಂಡುಕೊಂಡು ಟ್ರಾಫಿಕ್ ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡಲು ತತ್‌ಕ್ಷಣ ಸಂಬಂಧಪಟ್ಟ ಇಲಾಖೆಗೆ ಸೂಚಿಸಬೇಕೆಂದು ಕೋರಿರುವ ಬಗ್ಗೆ.

**ಉತ್ತರ:**

ಬೆಂಗಳೂರು ನಗರದಲ್ಲಿ ವಾಹನ ದಟ್ಟಣೆ ನಿವಾರಣೆ ಸಂಬಂಧ ಅಪರ ಮುಖ್ಯ ಕಾರ್ಯದರ್ಶಿ (ಒಳಾಡಳಿತ) ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ನಗರಾಭಿವೃದ್ಧಿ ಇಲಾಖೆ) ರವರ ಅಧ್ಯಕ್ಷತೆಯಲ್ಲಿ ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಇಲಾಖೆ ಒಳಗೊಂಡಂತೆ ಸಮನ್ವಯ ಸಭೆಯನ್ನು ನಡೆಸಲಾಗುತ್ತಿದ್ದು, ಸದರಿ ಸಮಿತಿಯಲ್ಲಿ ಬೆಂಗಳೂರು ನಗರದಲ್ಲಿನ ಪ್ರಮುಖ 10 ವಾಹನ ದಟ್ಟಣೆ ಇರುವ ಜಂಕ್ಷನ್‌ಗಳ ವಾಹನ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವ ಸಂಬಂಧ ಸ್ಥಳ ಪರಿಶೀಲನೆ ಮಾಡಿ ಹಲವು ಕಾಮಗಾರಿಗಳನ್ನು ಗುರುತಿಸಲಾಗಿರುತ್ತದೆ.

ಇದರಲ್ಲಿ ಹೆಬ್ಬಾಳ ಜಂಕ್ಷನ್‌ನಲ್ಲಿ ವಾಹನ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವ ಸಂಬಂಧ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಂಬಂಧಿಸಿದಂತೆ 18 ಕಾಮಗಾರಿಗಳಿದ್ದು, ಇದರಲ್ಲಿ 13 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿರುತ್ತದೆ ಹಾಗೂ ಉಳಿದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗುತ್ತಿದೆ.

ಮುಂದುವರೆದು, ಸಂಚಾರ ದಟ್ಟಣೆಯನ್ನು ಪರಿಹರಿಸಲು ಹೊರವರ್ತುಲ ರಸ್ತೆಯ ಹೆಬ್ಬಾಳ ಜಂಕ್ಷನ್‌ನಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಕಡೆಯಿಂದ ಬೆಂಗಳೂರು ನಗರದ ಕಡೆಗೆ ಸಂಚರಿಸುವ ವಾಹನಗಳಿಗೆ ಹೆಚ್ಚುವರಿ ಮೇಲುಸೇತುವೆ ನಿರ್ಮಾಣ ಹಾಗೂ ಹೊರವರ್ತುಲ ರಸ್ತೆಯ ಹೆಬ್ಬಾಳ ಜಂಕ್ಷನ್‌ನಲ್ಲಿ ತುಮಕೂರು ರಸ್ತೆ ಕಡೆಯಿಂದ ಕೆ.ಆರ್. ಪುರಂ ಕಡೆಗೆ ಸಂಚರಿಸುವ ವಾಹನಗಳಿಗೆ ಏಕಮುಖ ಕೆಳಸೇತುವೆ ನಿರ್ಮಾಣ ಕಾಮಗಾರಿಯ ಅಂದಾಜು ಮೊತ್ತ ರೂ.80.00 ಕೋಟಿಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು ಕೆ.ಆರ್.ಪುರಂ ಕಡೆಯಿಂದ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣ ಕಡೆಗೆ ಮೆಟ್ರೋ ರೈಲು ನಿರ್ಮಿಸಲು ಯೋಜಿಸಲಾಗಿದ್ದು, ಸದರಿ ಯೋಜನೆಯ ಪಂಕ್ತೀಕರಣ ಹೆಬ್ಬಾಳ ಜಂಕ್ಷನ್ ಮೂಲಕ ಹಾದುಹೋಗುತ್ತಿದ್ದು, ಮೆಟ್ರೋ ರೈಲು ಯೋಜನೆಯನ್ನು ನಿರ್ಮಿಸಲು ಉದ್ದೇಶಿಸಿರುವುದರಿಂದ ಹೆಬ್ಬಾಳ ಜಂಕ್ಷನ್ ಮೇಲುಸೇತುವೆ ವಿಸ್ತರಿಸುವ ಕಾಮಗಾರಿಯನ್ನು ಮೆಟ್ರೋ ಯೋಜನೆಯೊಂದಿಗೆ ಸಂಯೋಜನೆಗೊಳಿಸಿ ಸಮಗ್ರವಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಿರುವುದರಿಂದ ಯೋಜನೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಸದರಿ ಜಂಕ್ಷನ್‌ನಲ್ಲಿ ತುಮಕೂರು ಕಡೆಯಿಂದ ಕೆ.ಆರ್.ಪುರಂ ಕಡೆಗೆ ಏಕಮುಖ ಸಂಚಾರ ಕೆಳಸೇತುವೆ ಹಾಗೂ ಒಂದನೇ ಮಟ್ಟದ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಕಡೆಯಿಂದ ಬೆಂಗಳೂರು ನಗರದ ಕಡೆಗೆ ಬರುವ ರಸ್ತೆಯನ್ನು ಭಾಗಶಃ ಎರಡು/ಮೂರು ಪಥದ ರಸ್ತೆಯನ್ನು ವಿಸ್ತರಣೆ, ಕೆ.ಆರ್.ಪುರಂ ಕಡೆಯಿಂದ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಕಡೆಗೆ ಮೂರು ಪಥದ ಹೊಸ ಮೇಲುಸೇತುವೆ ನಿರ್ಮಾಣ, ಕೆ.ಆರ್.ಪುರಂ ಕಡೆಯಿಂದ ಬೆಂಗಳೂರು ನಗರದ ಕಡೆಗೆ ಎರಡು ಪಥದ ಹೊಸ ಮೇಲುಸೇತುವೆ ನಿರ್ಮಾಣ, ಬೆಂಗಳೂರು ನಗರದಿಂದ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಕಡೆಗೆ ಮೂರು ಪಥದ ರಸ್ತೆ ಹಾಗೂ ತುಮಕೂರು ರಸ್ತೆ ಕಡೆಗೆ ಶಾಖೆಯ ಎರಡು ಪಥದ ಹೊಸ ಮೇಲುಸೇತುವೆಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಾಣ ಮಾಡಲು ರೂ. 225.00 ಕೋಟಿಗಳಿಗೆ ಅಂದಾಜಿಸಿದ್ದು, ಟೆಂಡರ್ ಆಹ್ವಾನಿಸಲಾಗಿದೆ.

---

**ಸಂಖ್ಯೆ: ನಅಇ 344 ಬೆಂಭೂಸ್ವಾ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ